# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: ಅಗ್ನಿಶಾಮಕ & ತುರ್ತು ಸೇವೆಗಳು ಹಾಗೂ ಕಾರಾಗೃಹ ಇಲಾಖೆಗಳಲ್ಲಿನ ನಿರ್ದಿಷ್ಟ ವೃಂದಗಳಿಗೆ ಕಷ್ಟ ಪರಿಹಾರ ಭತ್ಯೆಯನ್ನು ಮಂಜೂರು ಮಾಡುವ ಕುರಿತು.**

**ಓದಲಾಗಿದೆ :**

ದಿನಾಂಕ: 04-10-2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 12 ಎಸ್‌ಆರ್‌ಪಿ 2019.

**ಪ್ರಸ್ತಾವನೆ :**

6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ ಮೇಲೆ ಓದಲಾದ ದಿನಾಂಕ: 04-10-2019ರ ಸರ್ಕಾರಿ ಆದೇಶದಲ್ಲಿ ಅಗ್ನಿಶಾಮಕ & ತುರ್ತು ಸೇವೆಗಳು ಹಾಗೂ ಕಾರಾಗೃಹ ಇಲಾಖೆಗಳಲ್ಲಿನ ನಿರ್ದಿಷ್ಟ ವರ್ಗದ ಹುದ್ದೆಗಳ ವೇತನ ಶ್ರೇಣಿಗಳನ್ನು ದಿನಾಂಕ: 01-10-2019ರಿಂದ ಜಾರಿಗೆ ಬರುವಂತೆ ಮೇಲ್ದರ್ಜೆಗೇರಿಸಲಾಗಿರುತ್ತದೆ.

ಈ ಮೇಲೆ ತಿಳಿಸಲಾದ ಇಲಾಖೆಗಳಲ್ಲಿನ ನಿರ್ದಿಷ್ಟ ವರ್ಗದ ಕಾರ್ಯನಿರ್ವಾಹಕ ಹುದ್ದೆಗಳ ಗುರುತರ ಕಾರ್ಯಸ್ವರೂಪ ಮತ್ತು ಹೊಣೆಗಾರಿಕೆ ಹಾಗೂ ಕಠಿಣತಮ ಕಾರ್ಯನಿರ್ವಹಣೆಯ ಹಿನ್ನೆಲೆಯಲ್ಲಿ ಈ ಹುದ್ದೆಗಳಿಗೆ ಕಷ್ಟ ಪರಿಹಾರ ಭತ್ಯೆಯನ್ನು ಮಂಜೂರು ಮಾಡುವುದನ್ನು ಸರ್ಕಾರವು ಪರಿಗಣಿಸಿರುತ್ತದೆ.

ಅದರಂತೆ, ಈ ಕೆಳಕಂಡ ಆದೇಶಗಳನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಆಇ 18 ಎಸ್‌ಆರ್‌ಪಿ 2019**
**ಬೆಂಗಳೂರು, ದಿನಾಂಕ: 4ನೇ ನವೆಂಬರ್ 2019**

ಅಗ್ನಿಶಾಮಕ & ತುರ್ತು ಸೇವೆಗಳು ಹಾಗೂ ಕಾರಾಗೃಹ ಇಲಾಖೆಗಳಲ್ಲಿನ ಈ ಕೆಳಗಿನ ವರ್ಗದ ಹುದ್ದೆಗಳಿಗೆ **1ನೇ ನವೆಂಬರ್ 2019**ರಿಂದ ಜಾರಿಗೆ ಬರುವಂತೆ ಮಾಸಿಕ ರೂ.1000/-ಗಳ ಕಷ್ಟ ಪರಿಹಾರ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ;

| ಕ್ರ. ಸಂ. | ಅಗ್ನಿಶಾಮಕ & ತುರ್ತು ಸೇವೆಗಳ ಇಲಾಖೆಯಲ್ಲಿನ ಹುದ್ದೆ / ವೃಂದ | ಕಾರಾಗೃಹ ಇಲಾಖೆಯಲ್ಲಿನ ಹುದ್ದೆ / ವೃಂದ |
|---|---|---|
| 1 | ಅಗ್ನಿಶಾಮಕರು | ವಾರ್ಡರ್ಸ್ |
| 2 | ಪ್ರಮುಖ ಅಗ್ನಿಶಾಮಕರು / ಅಗ್ನಿಶಾಮಕ ವಾಹನಚಾಲಕರು / ಡ್ರೈವರ್ ಮೆಕ್ಯಾನಿಕ್ | ಮುಖ್ಯ ವಾರ್ಡರ್ಸ್ |
| 3 | ಸಹಾಯಕ ಅಗ್ನಿಶಾಮಕ ಠಾಣಾಧಿಕಾರಿಗಳು | ಸಹಾಯಕ ಜೈಲರ್‌ಗಳು |
| 4 | ಅಗ್ನಿಶಾಮಕ ಠಾಣಾಧಿಕಾರಿಗಳು | ಜೈಲರ್‌ಗಳು |

2. ಈ ಆದೇಶದನ್ವಯ ಮಂಜೂರು ಮಾಡಲಾದ ಕಷ್ಟ ಪರಿಹಾರ ಭತ್ಯೆಯು ನಿಯೋಜನೆ ಮೇಲೆ ತೆರಳುವ ಮತ್ತು ನಿಯೋಜನೆ ಭತ್ಯೆ ಅಥವಾ ಸಂಬಂಧಿತ ಇಲಾಖೆ/ಸಂಸ್ಥೆಯ ಹುದ್ದೆಗಳಿಗೆ ಅನ್ವಯಿಸುವ ವಿಶೇಷ ಭತ್ಯೆಯನ್ನು ಪಡೆಯುತ್ತಿರುವವರಿಗೆ ಅನ್ವಯಿಸುವುದಿಲ್ಲ.

3. ಕಷ್ಟ ಪರಿಹಾರ ಭತ್ಯೆಯನ್ನು ಮುಂದಿನ ವೇತನ ಪರಿಷ್ಕರಣೆ ಅಥವಾ ಮುಂದಿನ ಆದೇಶಗಳವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆವಿಗೆ ಪಾವತಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಿ.ಎಸ್. ಜೋಗೋಜೆ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ(ಸೇವೆಗಳು-2).

BHR 11/11/19

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಘನತೆವೆತ್ತ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು-1
4. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ,(ಪಿ.ಬಿ. ನಂ.5398) ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ,(ಪಿ.ಬಿ. ನಂ.5398) ಬೆಂಗಳೂರು.
6. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
7. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು
9. ಡೈರೆಕ್ಟರ್ ಜನರಲ್ & ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, ನೃಪತುಂಗ ರೋಡ್, ಬೆಂಗಳೂರು.

10. ಪೊಲೀಸ್ ಮಹಾನಿರ್ದೇಶಕರು ಹಾಗೂ ಮಹಾನಿರ್ದೇಶಕರು, ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ರಾಜ್ಯ ವಿಪತ್ತು ಪಡೆಯ ನಿರ್ದೇಶನಾಲಯ, ನಂ.1, ಅಣ್ಣಾಸ್ವಾಮಿ ಮೊದಲಿಯಾರ್ ರಸ್ತೆ, ಬೆಂಗಳೂರು-560042.
11. ಹೆಚ್ಚುವರಿ ಮಹಾನಿರ್ದೇಶಕರು, ಕಾರಾಗೃಹ ಮತ್ತು ಸುಧಾರಣಾ ಸೇವೆ, ಶೇಷಾದ್ರಿ ರಸ್ತೆ, ಕರ್ನಾಟಕ ರಾಜ್ಯ, ಬೆಂಗಳೂರು-560009.
12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನ ಸೌಧ, ಬೆಂಗಳೂರು.
14. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
15. ಎಲ್ಲಾ ಜಿಲ್ಲೆಗಳ ಸೂಪರಿಂಟೆಂಡೆಂಟ್ ಆಫ್ ಪೊಲೀಸ್
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
20. ವಾರಪತ್ರ/ಶಾಖೆಯ ರಕ್ಷಾ ಕಡತ.

**Official Website of Finance Department, GOK: www.finance.karnataka.gov.in**